ಮಾಡಬೇಕೆಂದರೆ, ಬಿಪಿಎಲ್ ಗಿಂತ ಕೆಳಗಿದ್ದವರಿಗೆ ಸದರಿ ಯೋಜನೆ ಮಾಡಲಾಗುತ್ತದೆ ಎಂದು ಹೇಳಿದ್ದಾರೆ. ಆದ್ದರಿಂದ ಮುಂದಿನ ದಿನಗಳಲ್ಲಿ ನಮ್ಮ ಇಲಾಖೆಯ ಕಾರ್ಯದರ್ಶಿಯವರ ಮಟ್ಟದಲ್ಲಿ ಒಂದು ಸಭೆ ಮಾಡುತ್ತೇವೆ. ಹಾಗೆಯೇ ಇದರಲ್ಲಿ ರಾಜೀವ್‌ಗಾಂಧಿ ಹೌಸಿಂಗ್ ಕಾರ್ಪೊರೇಷನ್ ಇನ್ವಾಲ್‌ಮೆಂಟ್ ಇರುವುದರಿಂದ ಅವರ ಸಲಹೆ ಪಡೆದು ಕೊಂಡು ಮುಂದಿನ ದಿನಗಳಲ್ಲಿ ಈ ತೊಂದರೆ ನಿವಾರಣೆ ಮಾಡುವುದಕ್ಕೆ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತದೆಂದು ನಾನು ಈ ಸಂದರ್ಭದಲ್ಲಿ ಹೇಳುವುದಕ್ಕೆ ಬಯಸುತ್ತೇನೆ.

ರೈತ ಸಂಪರ್ಕ ಕೇಂದ್ರಗಳು

75 (230) ಶ್ರೀ ಬಾಲಕೃಷ್ಣ ಹೆಚ್.ಸಿ (ಮಾಗಡಿ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ಕ್ಷೇತ್ರ ವ್ಯಾಪ್ತಿಯಲ್ಲಿ ರೈತ ಸಂಪರ್ಕ ಕೇಂದ್ರಗಳನ್ನು ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಾದರೆ ಎಷ್ಟು ರೈತ ಸಂಪರ್ಕ ಕೇಂದ್ರಗಳನ್ನು ನಿರ್ಮಿಸ ಲಾಗುತ್ತಿದೆ; ಯಾವ್ಯಾವ ಗ್ರಾಮಗಳಲ್ಲಿ ನಿರ್ಮಿಸಲಾಗುತ್ತಿದೆ.

ಇ) ಹಾಗಾದರೆ, ನಿರ್ಮಿಸಲಾಗುತ್ತಿರುವ ರೈತ ಸಂಪರ್ಕ ಕೇಂದ್ರಗಳ ಕಾಮಗಾರಿಗಳು ಯಾವ ಹಂತದಲ್ಲಿವೆ;

ಈ) ಯಾವ ಕಾಲಮಿತಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಿ ಸಂಪರ್ಕ ಕೇಂದ್ರಗಳನ್ನು ರೈತರ ಉಪಯೋಗಕ್ಕೆ ಬಿಟ್ಟುಕೊಡಲಾಗುವುದು;

ಶ್ರೀ ಉಮೇಶ್ ಎ. ಕತ್ತಿ (ಕೃಷಿ ಸಚಿವರು) :

ಅ) ಹೌದು.

ಆ) ಒಂದು ರೈತ ಸಂಪರ್ಕ ಕೇಂದ್ರ ಕಟ್ಟಡವನ್ನು ತಿಪ್ಪಸಂದ್ರದಲ್ಲಿ ನಿರ್ಮಾಣ ಮಾಡಲಾಗುತ್ತಿದೆ.

ಇ) ಕಾಮಗಾರಿಯು ಪೂರ್ಣಗೊಳ್ಳುವ ಹಂತದಲ್ಲಿದೆ.

ಈ) ಇನ್ನೊಂದು ತಿಂಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ರೈತರ ಉಪಯೋಗಕ್ಕೆ ಬಿಟ್ಟುಕೊಡಲಾಗುವುದು.

ಶ್ರೀ ಹೆಚ್.ಸಿ ಬಾಲಕೃಷ್ಣ : ಮಾನ್ಯ ಅಧ್ಯಕ್ಷರೆ, ರೈತ ಸಂಪರ್ಕ ಕೇಂದ್ರಗಳ ಕಟ್ಟಡದ ನಿರ್ಮಾಣ ಕೆಲಸ ಪ್ರಾರಂಭ ಮಾಡಿದ್ದು, ಈಗ ಅಲ್ಲಿ ಕೆಲಸ ಮಾಡುತ್ತಿರುವವರಿಗೆ ಈಗಾಗಲೇ ಹಣ ಪಾವತಿ ಮಾಡಲಾಗಿದೆ ಎಂದು

ನಾನು ತಿಳಿದುಕೊಂಡಿದ್ದೇನೆ. ಆದರೂ ಕೂಡ ಅವರು ಕೆಲಸವನ್ನು ಪೂರ್ಣಗೊಳಿಸಿಲ್ಲ. ಇದಕ್ಕೆ ಕಾರಣ ಎನು? ಇದನ್ನು ರೈತರಿಗೆ ಯಾವಾಗ ಬಿಟ್ಟುಕೊಡುತ್ತೀರಿ? ಒಂದು ತಿಂಗಳಲ್ಲಿ ಬಿಟ್ಟುಕೊಡುವುದಕ್ಕೆ ಆಗುವುದಿಲ್ಲ. ನಿಮ್ಮ ಕೈಯಿಂದ ತಪ್ಪು ಉತ್ತರ ಕೊಡಿಸುತ್ತಿದ್ದಾರೆ. ಈಗಾಗಲೇ ಅವರಿಗೆ ಹಣ ಪಾವತಿ ಆಗಿದೆ. ಅವರು ಹಣ ತೆಗೆದುಕೊಂಡಿದ್ದಾರೆ. ಆದರೆ, ಅವರು ಏತಕ್ಕೋಸ್ಕರ ಕೆಲಸ ಮಾಡುತ್ತಿಲ್ಲ ಎಂಬ ಬಗ್ಗೆ ಹೇಳಬೇಕು.

ಶ್ರೀ ಉಮೇಶ್ ವಿ. ಕತ್ತಿ : ಮಾನ್ಯ ಸಭಾಧ್ಯಕ್ಷರೆ, 100 ಹೋಬಳಿಗಳಲ್ಲಿ ಒಟ್ಟು 100 ರೈತ ಸಂಪರ್ಕ ಕೇಂದ್ರ ಕಟ್ಟಡವನ್ನು ಕಟ್ಟುತ್ತಿದ್ದೇವೆ. ಒಂದು ತಿಂಗಳಲ್ಲಿ ಕಟ್ಟಡವನ್ನು ಮುಗಿಸಿ ಮಾನ್ಯ ಶಾಸಕರನ್ನು ಕರೆದುಕೊಂಡು ಹೋಗಿ ಉದ್ಘಾಟನೆ ಮಾಡಬೇಕೆಂಬುದು ನನಗೆ ಆಸೆ ಇದೆ. ಆದರೆ, ಕೆಲಸ ಆಗುತ್ತಿಲ್ಲವೆಂದು ಮಾನ್ಯ ಸದಸ್ಯರು ಹೇಳುತ್ತಿದ್ದಾರೆ. ಆದ್ದರಿಂದ, ನನ್ನ ಜೊತೆಯಲ್ಲಿ ನಿಮ್ಮನ್ನು ಕರೆದುಕೊಂಡು ಹೋಗಿ ಇನ್ಸ್‌ಪೆಕ್ಷನ್ ಮಾಡುತ್ತೇನೆ. ಅಲ್ಲಿ ಏನು ಕೆಲಸ ಆಗಿದೆ ಎಂದು ನೋಡಿ ಅಲ್ಲಿ ಏನಾದರೂ ತೊಂದರೆ ಇದ್ದರೆ ಶಿಸ್ತಿನ ಕ್ರಮವನ್ನು ತೆಗೆದುಕೊಳ್ಳುತ್ತೇನೆಂದು ಹೇಳುವುದಕ್ಕೆ ಬಯಸುತ್ತೇನೆ.

ತಡೆಹಿಡಿಯಲಾದ ಪ್ರಶ್ನೆಗಳು

ಅಧ್ಯಕ್ಷರು : ಡಾ॥ ಬಗಲಿ ಸಾರ್ವಭೌಮ – ಸಾತಗೌಡರ ಪ್ರಶ್ನೆ ಇದೆ, ಅವರು ಇಲ್ಲ. ಮುಂದಿನ ಪ್ರಶ್ನೆ ಮಾನ್ಯ ಎಂ.ಟಿ. ಕೃಷ್ಣಪ್ಪನವರದು ಇದೆ, ಅವರೂ ಸಹ ಇಲ್ಲ. ಮುಂದಿನ ಪ್ರಶ್ನೆ ಮಾನ್ಯ ಎ.ಮಂಜು ಅವರದು.

ರಸ್ತೆಯ ದುರಸ್ತಿ

19 (135) ಶ್ರೀ ಮಂಜು ಎ. (ಅರಕಲಗೂಡು) : ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಆರ್ಥಿಕ ಇಲಾಖೆಯಲ್ಲಿ ಇರುವ ಪ್ರತಿಯೊಂದು ವಿವಿಧ ವೃಂದಗಳಲ್ಲಿರುವ ಹುದ್ದೆಗಳ ಸಂಖ್ಯೆ (Cadre Strength) ಎಷ್ಟು; (ಗ್ರೂಪ್–ಎ,ಬಿ,ಸಿ ಮತ್ತು ಡಿ ಪ್ರತ್ಯೇಕವಾಗಿ ನೀಡುವುದು);

ಆ) ಕಳೆದ ವರ್ಷಗಳಲ್ಲಿ ಎಷ್ಟು ನೌಕರರುಗಳು ನಿವೃತ್ತಿ ಹೊಂದಿರುತ್ತಾರೆ; (ಸ್ವಯಂ ನಿವೃತ್ತಿ, ವಯೋಮಿತಿ ನಿವೃತ್ತಿ, ವಜಾಗೊಳ್ಳುವಿಕೆ ಸೇರಿದಂತೆ ವಿವರ ನೀಡುವುದು);

ಇ) ಕಳೆದ ವರ್ಷಗಳಲ್ಲಿ ಎಷ್ಟು ಸಿಬ್ಬಂದಿಗಳನ್ನು ಹೊಸದಾಗಿ ನೇಮಕ ಮಾಡಿಕೊಳ್ಳಲಾಗಿದೆ;